# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 169 | Pages. 2 | Date: 11-05-2025, SUNDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 169 - ಪುಟಗಳು : 2 - 11 ಮೇ 2025 ಭಾನುವಾರ Ph: 8762954248 ದರ : ₹1


# ಕದನ ವಿರಾಮ ಉಲ್ಲಂಘಿಸಿದ ಪಾಕ್

## ಟ್ರಂಪ್ ಮಧ್ಯಸ್ಥಿಕೆ ಒಪ್ಪಂದವನ್ನೇ ಮುರಿದ ಪಾಕಿಸ್ತಾನ!

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ನವದೆಹಲಿ: ಅಮೆರಿಕಾ ಮಧ್ಯಸ್ಥಿಕೆ ನಂತರ ಶನಿವಾರ ಸಂಜೆ ದಿಢೀರ್ ಜಾರಿಗೆ ಬಂದ ಭಾರತ-ಪಾಕ್ ನಡುವಿನ ಕದನ ವಿರಾಮ ಒಪ್ಪಂದ ಕೆಲವೇ ಗಂಟೆಗಳಲ್ಲಿ ಕೊನೆಗೊಂಡಿದ್ದು, ಪಾಕಿಸ್ತಾನ ಭಾರತದ ಹಲವು ನಗರಗಳನ್ನು ಗುರಿಯಾಗಿಸಿಕೊಂಡು ಅಪ್ರಚೋದಿತ ಗುಂಡಿನ ಹಾಗೂ ಡ್ರೋನ್ ದಾಳಿ ನಡೆಸುವ ಮೂಲಕ ತನ್ನ ಚಾಳಿ ಮುಂದುವರಿಸಿದೆ.

ವರದಿಗಳ ಪ್ರಕಾರ, ಜಮ್ಮು ಮತ್ತು ಕಾಶ್ಮೀರದಲ್ಲಿ ಗಡಿರೇಖೆ ಮತ್ತು ಅಂತರರಾಷ್ಟ್ರೀಯ ಗಡಿ ಉದ್ದಕ್ಕೂ ಪಾಕಿಸ್ತಾನವು ಅನೇಕ ಬಾರಿ ಕದನ ವಿರಾಮ ಉಲ್ಲಂಘನೆ ಮಾಡಿದೆ. ಇದು ಭಾರತದೊಂದಿಗಿನ ಉದ್ವಿಗ್ನತೆಯನ್ನು ಉಲ್ಬಣಗೊಳಿಸಿದೆ.

ಅಮೆರಿಕ ಸಂಯೋಜಿತ ಕದನ ವಿರಾಮ ಒಪ್ಪಂದವನ್ನು ಘೋಷಿಸಿದ ಕೆಲವೇ ಗಂಟೆಗಳ ನಂತರ, ಪಾಕಿಸ್ತಾನವು ಅಖ್ನೂರ್, ರಜೌರಿ, ಆರ್‌ಎಸ್ ಪುರಾ ಮತ್ತು ಶ್ರೀನಗರ ಸೇರಿದಂತೆ ಹಲವು ವಲಯಗಳಲ್ಲಿ ಫಿರಂಗಿ ದಾಳಿ ಮತ್ತು ಡ್ರೋನ್ ದಾಳಿಗಳೊಂದಿಗೆ ಒಪ್ಪಂದವನ್ನು ಉಲ್ಲಂಘಿಸಿತು. ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ವಾಯು ರಕ್ಷಣಾ ಚಟುವಟಿಕೆಯನ್ನು ಗಮನಿಸಿದ್ದಾರೆ. ಉಲ್ಲಂಘನೆಯಿಂದಾಗಿ ಪಂಜಾಬ್‌ನ ಫಾಜಿಲ್ಕಾ, ಹೋಶಿಯಾರ್ ಪುರ್ ಮತ್ತು ಫಿರೋಜ್‌ಪುರ್‌ನಂತಹ ಗಡಿ ಜಿಲ್ಲೆಗಳಲ್ಲಿ ವಿದ್ಯುತ್ ಕಡಿತವನ್ನು ಜಾರಿಗೊಳಿಸಲಾಯಿತು.




### ಪಹಲ್ಗಾಮ್‌ನಲ್ಲಿ ಆಗಿದ್ದೇನು

ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 26 ಭಾರತೀಯರು ಮೃತಪಟ್ಟಿದ್ದರು. ಈ ದಾಳಿಗೆ ಪಾಕಿಸ್ತಾನದ ಬೆಂಬಲವಿದೆ ಎಂದು ಭಾರತ ಆರೋಪಿಸಿತ್ತು. ಇದಕ್ಕೆ ಪ್ರತೀಕಾರವಾಗಿ ಮೇ 7ರಂದು ಭಾರತವು ಆಪರೇಷನ್ ಸಿಂದೂರ ಕಾರ್ಯಾಚರಣೆಯಡಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿತ್ತು. ಪಾಕಿಸ್ತಾನವು ಇದಕ್ಕೆ ಪ್ರತಿಯಾಗಿ ಡ್ರೋನ್ ದಾಳಿಗಳನ್ನು ನಡೆಸಿತು. ಇದರಿಂದ ಉದ್ವಿಗ್ನತೆ ಹೆಚ್ಚಿತು.

### ಅಮೆರಿಕದ ಮಧ್ಯಸ್ಥಿಕೆಯ ಪಾತ್ರ

ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವಾನ್ಸ್ ಮತ್ತು ರಾಜ್ಯ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರು ಭಾರತದ ಪ್ರಧಾನಿ ನರೇಂದ್ರ ಮೋದಿ, ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಶರೀಫ್, ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್, ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಆಸೀಂ ಮುನೀರ್, ರಾಷ್ಟ್ರೀಯ ಭದ್ರತಾ ಸಲಹೆಗಾರರಾದ ಅಜಿತ್ ದೋವಲ್ ಮತ್ತು ಆಸೀಂ ಮಲಿಕ್ ಅವರೊಂದಿಗೆ ದೀರ್ಘ ಮಾತುಕತೆ ನಡೆಸಿದರು.

ಈ ಚರ್ಚೆಯಲ್ಲಿ ಎರಡೂ ದೇಶಗಳು ಶಾಂತಿಯ ಮಾರ್ಗವನ್ನು ಆಯ್ಕೆ ಮಾಡಿರುವ ಬಗ್ಗೆ ರೂಬಿಯೊ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಪ್ರಧಾನಮಂತ್ರಿಗಳಾದ ಮೋದಿ ಮತ್ತು ಶರೀಫ್ ಅವರ ಬುದ್ಧಿವಂತಿಕೆ, ಸಂಯಮ ಮತ್ತು ನಾಯಕತ್ವವನ್ನು ನಾವು ಶ್ಲಾಘಿಸುತ್ತೇವೆ ಎಂದು ಅವರು ಹೇಳಿದ್ದರು.

### ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ

ಈ ಸಂಘರ್ಷದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಕಟ್ಟುನಿಟ್ಟಿನ ಕ್ರಮಗಳನ್ನು ಘೋಷಿಸಿದ್ದಾರೆ. ಸುಳ್ಳು ಸುದ್ದಿಗಳನ್ನು ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದು, ಎಲ್ಲ ಜಿಲ್ಲೆಗಳಲ್ಲಿ ಮಾಕ್ ಡ್ರಿಲ್‌ಗಳನ್ನು ನಡೆಸಲು ಆದೇಶಿಸಿದ್ದಾರೆ.

### ಸೇನಾಧಿಕಾರಿಗಳ ಮ್ಯಾರಥಾನ್ ಮೀಟಿಂಗ್

ಕದನ ವಿರಾಮ ಉಲ್ಲಂಘನೆ ಬಳಿಕ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿದ ಭಾರತೀಯ ಸೇನೆ ಪಾಕಿಸ್ತಾನದ ಹಾರಿಸಿದ ನೂರು ಡ್ರೋನ್ ಗಳನ್ನು ಯಶಸ್ವಿಯಾಗಿ ಎದುರಿಸಿತು.

ಭಾರತದ ಪ್ರತ್ಯುತ್ತರಕ್ಕೆ ಬೆದರಿದ ಪಾಕಿಸ್ತಾನ ರಾತ್ರಿ 10.15ರ ವೇಳೆಗೆ ಎಲ್‌ಒಸಿಯಲ್ಲಿ ಗುಂಡಿನ ದಾಳಿಯನ್ನು ನಿಲ್ಲಿಸಿತು.

ದಾಳಿಗೆ ಬಂದಿದ್ದ ಪಾಕ್ ಡ್ರೋನ್‌ಗಳನ್ನು ಬಿಎಸ್‌ಎಫ್ ಯಶಸ್ವಿಯಾಗಿ ಹಿಮ್ಮೆಟ್ಟಿಸಿತು. ಪಾಕಿಸ್ತಾನ ಕದನ ವಿರಾಮ ಉಲ್ಲಂಘಿಸಿದೆ ಎಂದು ಭಾರತ ಸರ್ಕಾರ ಅಧಿಕೃತವಾಗಿ ಪ್ರಕಟಿಸಿದೆ. ತಡರಾತ್ರಿ ಸೇನಾ ಅಧಿಕಾರಿಗಳು ಮ್ಯಾರಥಾನ್ ಮೀಟಿಂಗ್ ಮಾಡಿದರು. ಕಟ್ಟೆಚ್ಚರ ವಹಿಸುವಂತೆ ಎಲ್ಲಾ ರಾಜ್ಯಗಳಿಗೆ ಕೇಂದ್ರ ಸರ್ಕಾರ ಸೂಚನೆ ನೀಡಿದೆ.

## ವಿದ್ಯುತ್ ಸ್ಪರ್ಶದಿಂದ ಕಾಡಾನೆ ಸಾವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ತಾಲ್ಲೂಕಿನ ಸುಳ್ಳಕ್ಕಿ-ಶಾಂತಪುರ ಗ್ರಾಮದ ಬಳಿ ಶನಿವಾರ ಕಾಫಿ ತೋಟದಿಂದ ದಾಟುವ ವೇಳೆ ವಿದ್ಯುತ್ ಸ್ಪರ್ಶಿಸಿ ಕಾಡಾನೆಯೊಂದು ದಾರುಣ ಸಾವಿಗೀಡಾಗಿದೆ.

ಸುಮಾರು 28 ವರ್ಷದ ಸಲಗ ತೀವ್ರ ಗಾಯಗೊಂಡ ಸ್ಥಿತಿಯಲ್ಲಿ ರಸ್ತೆ ಬದಿ ಬಿದ್ದಿತ್ತು. ಆನೆಯ ಕಳೆಬರದ ಕೆಳಗೆ ವೈರ್ ಸಿಲುಕಿರುವುದು ಕಂಡುಬಂದಿದ್ದು, ತಲೆಯ ಭಾಗದಲ್ಲಿ ರಕ್ತಸ್ರಾವದಿಂದ ಕೂಡಿದ ಗಾಯದ ಗುರುತುಗಳಿವೆ.

ಬೆಳಿಗ್ಗೆ ಈ ದಾರಿಯಲ್ಲಿ ಸಂಚರಿಸುತ್ತಿದ್ದವರು ಆನೆಯ ಕಳೆಬರವನ್ನು ಗಮನಿಸಿ ಅರಣ್ಯ ಇಲಾಖೆಗೆ ತಕ್ಷಣ ಮಾಹಿತಿ ಒದಗಿಸಿದ್ದಾರೆ. ಸೆಸ್ಕ್ ಸಿಬ್ಬಂದಿ ಹೈಟೆನ್ಷನ್ ವಿದ್ಯುತ್ ಲೈನ್‌ನ ಕಂಬಕ್ಕೆ ಸಂಬಂಧಿಸಿದ ವೈರ್ ಅನ್ನು ಸಮೀಪದ ಮರಕ್ಕೆ ಕಟ್ಟಿರುವುದು



ಸಾವಿಗೆ ಕಾರಣವಾಗಿರಬಹುದು ಎಂದು ಶಂಕಿಸಲಾಗಿದೆ. ಈ ವೈರ್‌ಗೆ ಆನೆ ತಾಗಿದ ಪರಿಣಾಮ ವಿದ್ಯುತ್ ಆಘಾತಕ್ಕೊಳಗಾಗಿರಬಹುದು ಎನ್ನಲಾಗಿದೆ.

ಘಟನೆ ಸಂಬಂಧ ಪ್ರಾಥಮಿಕ ತನಿಖೆ ನಡೆಸಿ ಮೇಲ್ನೋಟಕ್ಕೆ ಸೆಸ್ಕ್ ಇಲಾಖೆ ನಿರ್ಲಕ್ಷ್ಯದಿಂದ ಆನೆ ಸಾವಿಗೀಡಾಗಿದೆ ಎಂದು ಅರಣ್ಯ ಇಲಾಖೆ ಸೆಸ್ಕ್ ವಿರುದ್ಧ ದೂರು ದಾಖಲಿಸಿದೆ.

ಕಾಡಾನೆ ಸಾವಿಗೆ ಸೆಸ್ಕ್ ನಿರ್ಲಕ್ಷ್ಯವೇ ಕಾರಣ. ಇದುವರೆಗೆ ತಾಲ್ಲೂಕಿನಲ್ಲಿ 10ಕ್ಕೂ ಹೆಚ್ಚು ಕಾಡಾನೆಗಳು ಇಲಾಖೆಯ ನಿರ್ಲಕ್ಷ್ಯದಿಂದ ಮೃತಪಟ್ಟಿವೆ. ಅರಣ್ಯ ಇಲಾಖೆ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದೆ ಇರುವುದೇ ದುರಂತಗಳಿಗೆ ಕಾರಣವಾಗಿದೆ. ಕಾಡಾನೆ ಸಾವಿಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳದಿದ್ದರೆ ಮಲೆನಾಡು ರಕ್ಷಣಾ ಸೇನೆಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು.



- ಡಾ. ಸಾಗರ್ ಜಾನೆಕೆರೆ, ಮಲೆನಾಡು ರಕ್ಷಣಾ ಸೇನೆ ರಾಜ್ಯಾಧ್ಯಕ್ಷ

## ಭಾರತೀಯ ಸೈನಿಕರಿಗೆ ನೈತಿಕ ಸ್ಥೈರ್ಯ: ಬೈಕ್ ರ್ಯಾಲಿ

ಹಾಸನ: ದೇಶದ ಸುರಕ್ಷತೆಗಾಗಿ ಗಡಿ ಕಾಯುತ್ತಿರುವ ಭಾರತೀಯ ಸೈನಿಕರಿಗೆ ಧೈರ್ಯ ತುಂಬಿ, ಅವರಿಗೆ ಒಳ್ಳೆಯ ಆರೋಗ್ಯ ಜೊತೆಗೆ ಯಾವ ಸಂದರ್ಭದಲ್ಲೂ ಪ್ರಾಣ ಹಾನಿ ಆಗದಿರಲಿ ಎಂದು ಪ್ರಾರ್ಥಿಸಿ ನಗರದ ರೈಲ್ವೆ ನಿಲ್ದಾಣದ ಎದುರಿನ ಶ್ರೀ ಆಂಜನೇಯ ದೇವಸ್ಥಾನದಲ್ಲಿ ನೂರಾರು ಮಾಜಿ ಸೈನಿಕರು ಹಾಗೂ ವಿವಿಧ ಹಿಂದು ಪರ ಸಂಘಟನೆ ಕಾರ್ಯಕರ್ತರು ಪೂಜೆ ಸಲ್ಲಿಸಿ ನಗರದ ಪ್ರಮುಖ ರಸ್ತೆಗಳಲ್ಲಿ ಬೈಕ್ ರ್ಯಾಲಿ ನಡೆಸಿದರು.

ರಾಷ್ಟ್ರೀಯ ಮಾಜಿ ಸೈನಿಕರ ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷ ಎ.ಎಸ್. ಪ್ರದೀಪ್ ಸಾಗರ್ ಮಾತನಾಡಿ, ನಮ್ಮನ್ನು ಕಾಯುತ್ತಿರುವ ಸೈನಿಕರಿಗೆ ಹಾಗೂ ಅವರ ಕುಟುಂಬಕ್ಕೂ ಧೈರ್ಯ ತುಂಬುವ ಉದ್ದೇಶದಿಂದ ವಿಶೇಷ ಪೂಜೆ ಆಯೋಜನೆ ಮಾಡಲಾಗಿದೆ ಎಂದರು.

ಪ್ರತಿ ಸೈನಿಕರಿಗೆ ದೇಶದ ಸಮಸ್ತ ನಾಗರಿಕರು ಗೌರವ ಕೊಡಬೇಕು.




ಜೊತೆಗೆ ಸೈನಿಕರ ಶ್ರೇಯಸ್ಸಿಗಾಗಿ ಪ್ರತಿ ನಾಗರಿಕರೂ ದೇವರಿಗೆ ಪೂಜೆ ಸಲ್ಲಿಸಿ ಪ್ರಾರ್ಥಿಸಬೇಕು ಎಂದು ಕೇಳಿಕೊಂಡರು.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ನಡೆಸಿದ ಅಮಾಯಕ ಭಾರತೀಯರ ಹತ್ಯೆಗೆ ಪ್ರತ್ಯುತ್ತರವಾಗಿ ಭಾರತೀಯ ಸೇನೆಯು ಅಪರೇಷನ್ ಸಿಂಧೂರ ಹೆಸರಿನಲ್ಲಿ ಭಯೋತ್ಪಾದನೆ, ಉಗ್ರರ ಹುಟ್ಟಡಗಿಸುವ ಕಾರ್ಯಾಚರಣೆ ನಡೆಸಿ ಅದರಲ್ಲಿ ಯಶಸ್ವಿಯಾಗಿದೆ.

ಉಗ್ರರ ಸುಮಾರು 9 ಅಡಗುತಾಣಗಳನ್ನು ನಮ್ಮ ಯೋಧರು ಧ್ವಂಸಗೊಳಿಸಿದ್ದಾರೆ. ನಮ್ಮ ಸೇನೆಯ ಈ ಕೆಚ್ಚೆದೆಯ ಸೈನಿಕರ ಯಶೋಗಾಥೆಯ ಬಗ್ಗೆ ಹೆಮ್ಮೆ ವ್ಯಕ್ತಪಡಿಸಲು ಹಾಗೂ ಯುದ್ಧದ ಕಾರ್ಮೋಡ ಆವರಿಸಿರುವ ಈ ಘಳಿಗೆಯಲ್ಲಿ ನಮ್ಮ ದೇಶದ ಸೈನಿಕರಿಗೆ ನೈತಿಕ ಬೆಂಬಲವಾಗಿ ಹಾಗೂ ಈ ವಿಚಾರವಾಗಿ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಬೈಕ್ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದರು.

ಮಾಜಿ ಸೈನಿಕರ ಬೈಕ್ ರ್ಯಾಲಿ ರೈಲ್ವೆ ನಿಲ್ದಾಣದ ಆಂಜನೇಯಸ್ವಾಮಿ ದೇವಾಲಯ ಬಳಿಯಿಂದ ಹೊರಟು, ಶಂಕರಿಮಠ ರಸ್ತೆ, ಮಹಾತ್ಮ ಗಾಂಧಿ ರಸ್ತೆಯ ಮೂಲಕ ತನ್ವಿ ತ್ರಿಷಾ ಸರ್ಕಲ್ ನಿಂದ ಸುಬೇದಾರ್ ನಾಗೇಶ್ ವೃತ್ತ, ಸಹ್ಯಾದ್ರಿ ವೃತ್ತ, ಮಹಾವೀರ ವೃತ್ತ ಮಾರ್ಗವಾಗಿ ಹೇಮಾವತಿ ಪ್ರತಿಮೆ ಎನ್.ಆರ್ ಸರ್ಕಲ್, ಮೂಲಕ ಬಿ.ಎಂ. ರಸ್ತೆಯಿಂದ ಡಿಸಿ ಕಚೇರಿಗೆ ಬಂದು, ಅಲ್ಲಿಂದ ಕುವೆಂಪುನಗರದ ಫೀಲ್ಡ್ ಮಾರ್ಷಲ್ ಕೆ.ಎಂ ಕಾರ್ಯಪ್ಪ ವಾರ್ ಮೆಮೋರಿಯಲ್ ಹಾಲ್ ಆವರಣ ತುಲುಪಿದರು.

ಈ ವೇಳೆ ರಾಷ್ಟ್ರೀಯ ಮಾಜಿ ಸೈನಿಕರ ಸಮನ್ವಯ ಸಮಿತಿ ತಾಲೂಕು ಅಧ್ಯಕ್ಷ ಕರೀಗೌಡ, ಉಪಾಧ್ಯಕ್ಷ ರಮೇಶ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಯೋಗರಾಜು, ಕಾಳೇಗೌಡ, ಮಾಜಿ ಜಿಲ್ಲಾಧ್ಯಕ್ಷ ನಾಗರಾಜು, ಗಂಗಾಧರ್, ಖಜಾಂಚಿ ತಿಮ್ಮೇಗೌಡ, ಬಿ. ಸೋಮೇಶ್, ವೆಂಕಟೇಶ್, ಲೋಕೇಶ್ ಇದ್ದರು.

## ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಕಾಂಪೌಂಡ್ ಭಾಗ್ಯ




IMPACT ಕನ್ನಡ ಪೋಸ್ಟ್ IMPACT

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಗಂಧದಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ರಕ್ಷಣೆ ಕಲ್ಪಿಸಬೇಕೆಂಬ ಕನ್ನಡ ಪೋಸ್ಟ್ ವರದಿಗೆ ಅಧಿಕಾರಿಗಳು ಎಚ್ಚೆತ್ತುಕೊಂಡಿದ್ದು, ಅರ್ಧಕ್ಕೆ ನಿಂತಿದ್ದ ಕಾಂಪೌಂಡ್ ಕಾಮಗಾರಿ ಪೂರ್ಣಗೊಳಿಸಿ ಬಣ್ಣ ಬಳಿಯುವ ಕಾರ್ಯ ಕೈಗೊಂಡಿದೆ.

ಮೇ 6 ರಂದು ಕನ್ನಡ ಪೋಸ್ಟ್ 'ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಬೇಕಿದೆ ರಕ್ಷಣೆ' ಶೀರ್ಷಿಕೆಯಡಿ ವಿಶೇಷ ವರದಿ ಪ್ರಕಟಿಸಿತ್ತು. ಕಾಲೇಜು ಆವರಣ ಸೂಕ್ತ ಕಾಂಪೌಂಡ್ ಇಲ್ಲದೆ ಪುಂಡ ಪೋಕರಿಗಳ ತಾಣವಾಗಿದ್ದರಿಂದ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ಭಯ ಭೀತರಾಗಿದ್ದರು. ರಾತ್ರಿಯಾದರೆ ಬೈಕ್, ಕಾರುಗಳಲ್ಲಿ ಬರುತ್ತಿದ್ದ ಯುವಕರು ಮದ್ಯ ಸೇವಿಸಿ ಗಲಾಟೆ ಮಾಡುತ್ತಿದ್ದರು. ಕಾಲೇಜು ಆವರಣದಲ್ಲಿ ಮದ್ಯದ ಬಾಟಲಿ ಎಸೆದು ಅನೈರ್ಮಲ್ಯ ಉಂಟು ಮಾಡುತ್ತಿದ್ದರು. ವರದಿಯಿಂದ ಎಚ್ಚೆತ್ತ ಅಧಿಕಾರಿಗಳು ಅರ್ಧ ಮಾತ್ರ ಪೂರ್ಣಗೊಂಡಿದ್ದ ಕಾಂಪೌಂಡ್ ಕಾಮಗಾರಿ ಪೂರ್ಣಗೊಳಿಸಿದ್ದಾರೆ. ಜೊತೆಗೆ ತಡೆಗೋಡೆಗೆ ಬಣ್ಣ ಬಳಿಯುವ ಕೆಲಸವು ಆರಂಭವಾಗಿದೆ.

ಖಾಸಗಿ ಕಾಲೇಜುಗಳಿಗೆ ಯಾವುದರಲ್ಲೂ ಕಡಿಮೆ ಇಲ್ಲ ಎನ್ನುವಂತೆ ಸುಸಜ್ಜಿತ ಕಟ್ಟಡ, ಅಗತ್ಯ ಬೋಧಕ ಸಿಬ್ಬಂದಿ ಸೇರಿ ಎಲ್ಲ ಸೌಕರ್ಯಗಳನ್ನು ಕಾಲೇಜು ಹೊಂದಿದೆಯಾದರೂ ಆರ್.ಸಿ. ರಸ್ತೆ ಹಾಗು ಕಾಲೇಜು ಮುಂಭಾಗ ನಿರ್ಮಾಣವಾಗಿರುವ ಸಿಮೆಂಟ್ ರಸ್ತೆ ಕುಡುಕರ ತಾಣವಾಗಿ ಮಾರ್ಪಟ್ಟಿತ್ತು.

ಅದಕ್ಕೆ ಕಡಿವಾಣ ಹಾಕಲು ಮುಂದಾಗಿದ್ದು ಮುಂದುವರೆದಂತೆ ಆರ್.ಸಿ. ರಸ್ತೆಯ ಫಲ್ಗುಣಿ ಹೋಟೆಲ್ ಎದುರಿನ ರಸ್ತೆಯಿಂದ ಬರುವ ವಾಹನಗಳ ಸಂಚಾರ ನಿಷೇಧಿಸಬೇಕಿದೆ.

ಸೂಪರ್ ಸ್ಪೆಷಾಲಿಟಿ ಹಾಸ್ಪಿಟಲ್ ಹಾಗು ಕಾಲೇಜು ಮಧ್ಯದ ಈ ರಸ್ತೆ ಸಾರ್ವಜನಿಕ ರಸ್ತೆಯಾಗಿ ಮಾರ್ಪಾಡಾಗಿದೆ. ಪುಂಡ ಪೋಕರಿಗಳು ಅನೈತಿಕ ಚಟುವಟಿಕೆಗಾಗಿ ರಸ್ತೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದು, ವಾಹನ ಓಡಾಟಕ್ಕೆ ತಡೆಯೊಡ್ಡಬೇಕು ಎಂದು ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ಆಗ್ರಹಿಸಿದ್ದಾರೆ.

## ತುರ್ತು ಕರೆ: ಕರ್ತವ್ಯಕ್ಕೆ ಮರಳಿದ ಸೈನಿಕರು



ಅರಸೀಕೆರೆ: ಭಾರತ-ಪಾಕಿಸ್ತಾನ ಮಧ್ಯೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಕರ್ತವ್ಯಕ್ಕೆ ಮರಳುವಂತೆ ಸೇನೆಯಿಂದ ಕರೆ ಬಂದಿದ್ದರಿಂದ ರಜೆಗೆ ಬಂದಿದ್ದ ಜಿಲ್ಲೆಯ ಐವರು ಸೈನಿಕರು ಶನಿವಾರ ರೈಲು ಮೂಲಕ ಕರ್ತವ್ಯಕ್ಕೆ ವಾಪಸ್ಸಾದರು.

ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ನಗರದ ರೈಲ್ವೆ ನಿಲ್ದಾಣದಲ್ಲಿ ಯೋಧರಿಗೆ ಸನ್ಮಾನಿಸಿ ಬೀಳ್ಕೊಟ್ಟರು. ಅರಸೀಕೆರೆ ತಾಲ್ಲೂಕಿನ ಹರಪನಹಳ್ಳಿ ಗ್ರಾಮದ ಸಂಜೀವನಾಯ್ಕ, ಬಸವನಪುರದ ದಿನೇಶ್‌ನಾಯ್ಕ ಹಾಗೂ ಹರಿಹರಪುರದ ಹರೀಶ್‌ನಾಯ್ಕ, ಹೊಳೆನರಸೀಪುರ ತಾಲ್ಲೂಕು ಉಣ್ಣೇನಹಳ್ಳಿ ಗ್ರಾಮದ ಸಹೋದರರಾದ ಸುದರ್ಶನ್ ಹಾಗೂ ಮಧುಕುಮಾರ್ ಕರ್ತವ್ಯಕ್ಕೆ ಮರಳಿದ ಯೋಧರು. ಬಿಎಸ್‌ಎಫ್, ಭೂಸೇನೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಯೋಧರು ರಜೆ ಮೇಲೆ ತವರಿಗೆ ಬಂದಿದ್ದರು. ಆದರೆ ಭಾರತ-ಪಾಕಿಸ್ತಾನ ನಡುವೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾದ ಹಿನ್ನಲೆಯಲ್ಲಿ ಕರ್ತವ್ಯಕ್ಕೆ ಕೂಡಲೇ ಬರುವಂತೆ ಮೇಲಧಿಕಾರಿಗಳಿಂದ ಸೂಚನೆ ಬಂದಿತ್ತು.

ದೇಶ ಸೇವೆಗಾಗಿ ಜಿಲ್ಲೆಯ ಯೋಧರು ಕರ್ತವ್ಯಕ್ಕೆ ಮರುಳುತ್ತಿರುವ ವಿಚಾರ ತಿಳಿದ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿದರು. ಎಲ್ಲಾ ಸೈನಿಕರಿಗೆ ಸನ್ಮಾನಿಸಿ ಗೆಲುವಿಗಾಗಿ ಪ್ರಾರ್ಥಿಸಿದರು. ಇದೇ ವೇಳೆ ದೇಶ ರಕ್ಷಣೆಯಲ್ಲಿ ಸೈನಿಕರ ಪಾತ್ರವನ್ನು ಕೊಂಡಾಡಿದರು.

## ಅರ್ಥಪೂರ್ಣ ಬುದ್ಧ ಜಯಂತಿಗೆ ಡಿಎಸ್‌ಎಸ್ ಬೆಂಬಲ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾಡಳಿತದಿಂದ ಮೇ 12ರಂದು ಆಚರಿಸುತ್ತಿರುವ ಬುದ್ಧ ಜಯಂತಿಗೆ ದಲಿತ ಸಂಘಟನೆಗಳು ಸಂಪೂರ್ಣ ಬೆಂಬಲ ನೀಡಲಿವೆ ಎಂದು ದಲಿತ ಸಂಘಟನೆಗಳ ಸಮನ್ವಯ ಸಮಿತಿ ಜಿಲ್ಲಾಧ್ಯಕ್ಷ ಕೃಷ್ಣದಾಸ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶನಿವಾರ ಮಾತನಾಡಿ, ಕಾರ್ಯಕ್ರಮಕ್ಕೂ ಮೊದಲು ಜಿಲ್ಲಾಧಿಕಾರಿ ಕಚೇರಿಯಿಂದ ಹಾಸನಾಂಬ ಕಲಾ ಭವನದ ವರೆಗೂ ಮೆರವಣಿಗೆ ನಡೆಸಲಾಗುವುದು. ಶಾಸಕ ಹೆಚ್.ಪಿ.ಸ್ವರೂಪ್ ಸಮಾರಂಭದ ಅಧ್ಯಕ್ಷತೆ ವಹಿಸಲ್ಲಿದ್ದಾರೆ. ಸಂಸದ ಶ್ರೇಯಸ್ ಪಟೇಲ್, ಶಾಸಕರು ಭಾಗವಹಿಸಲಿದ್ದಾರೆ. ಅಕ್ಕ ಐಎಎಸ್ ಅಕಾಡೆಮಿ ಮುಖ್ಯಸ್ಥ ಡಾ. ಶಿವಕುಮಾರ್ ಉಪನ್ಯಾಸ ನೀಡಲಿದ್ದಾರೆ ಎಂದರು.




ಗೌತಮ ಬುದ್ಧ ಭಾರತದ ನೆಲದಲ್ಲಿ ಜನ್ಮತಾಳಿದ ಮಾನವೀಯತೆಯ ಮೂಲ ಜೀವಧಾತು. ಬೌದ್ಧ ಧರ್ಮದ ಸ್ಥಾಪಕ ಗೌತಮ ಬುದ್ಧ. ಅವರು ಹುಟ್ಟಿದ್ದು, ಜ್ಞಾನೋದಯ ಪಡೆದು ಪರಿನಿಬ್ಬಾಣ ಹೊಂದಿದ್ದು ಒಂದೇ ದಿನ ಅಂದರೆ ಪವಿತ್ರ ವೈಶಾಖ ಹುಣ್ಣಿಮೆ ಎಂಬುದು ಗಮನಾರ್ಹ. ಈ ದಿನ ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಬುದ್ಧ ಜಯಂತಿ ಆಚರಿಸಲು ರಾಜ್ಯ ಸರ್ಕಾರ ತೀರ್ಮಾನ ತೆಗೆದುಕೊಂಡಿರುವುದನ್ನು ದಲಿತ ಸಂಘಟನೆಗಳ ಸಮನ್ವಯ ಸಮಿತಿ ಜಿಲ್ಲಾ ಶಾಖೆ ಸ್ವಾಗತಿಸುತ್ತದೆ. ಮೇ 12 ರ ಕಾರ್ಯಕ್ರಮದಲ್ಲಿ ಜಿಲ್ಲೆಯ ಸಮಸ್ತ ಬುದ್ಧ ಅನುಯಾಯಿಗಳು, ಅಭಿಮಾನಿಗಳು ಶೋಷಿತ ಸಮುದಾಯಗಳು, ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಿದರು.

ಸಮಿತಿ ಪ್ರಧಾನ ಕಾರ್ಯದರ್ಶಿ ನಾಗರಾಜು ಹೆತ್ತೂರ್, ಉಪಾಧ್ಯಕ್ಷ ಅಂಬುಗ ಮಲ್ಲೇಶ್, ಖಜಾಂಚಿ ರಮೇಶ್ ಸಾತೇನಹಳ್ಳಿ, ಜಂಟಿ ಕಾರ್ಯದರ್ಶಿ ದಂಡೋರ ಕುಮಾರಸ್ವಾಮಿ, ಸದಸ್ಯ ಹೇಮಂತ್ ಭೀಮ್ ಆರ್ಮಿ ಇತರರಿದ್ದರು.

## ಹಾಸನದಲ್ಲಿ ಶಂಕರ ಭಗವತ್ಪಾದರ ಜಯಂತಿ



ಹಾಸನ: ಶ್ರೀ ಶಂಕರ ತತ್ವ ಪ್ರಸಾರ ಪ್ರತಿಷ್ಠಾನದ ವತಿಯಿಂದ ನಗರದಲ್ಲಿ ಜಗದ್ಗುರು ಶ್ರೀ ಶಂಕರ ಭಗವತ್ಪಾದರ ಜಯಂತಿ ವಿಜೃಂಭಣೆಯಿಂದ ನೆರವೇರಿತು. ಒಂದು ವಾರದಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಶನಿವಾರ ಸಂಜೆ ಭವ್ಯ ಮೆರವಣಿಗೆ ಮೂಲಕ ಸಂಪನ್ನಗೊಂಡಿತು. ಈ ಸಂದರ್ಭದಲ್ಲಿ ರಾಷ್ಟ್ರ ರಕ್ಷಣೆಯ ಸಂಕಲ್ಪದೊಂದಿಗೆ 10ನೇ ವರ್ಷದ ಜಯಂತಿ ಉತ್ಸವಕ್ಕೆ ಚಾಲನೆ ದೊರಕಿತು.

ಸ್ಥಳೀಯ ಭಜನಾ ತಂಡಗಳು, ನಾದಸ್ವರ, ಚಂಡೆ, ವೇದ ಘೋಷದೊಂದಿಗೆ ಮೆರವಣಿಗೆ ಮೆರುಗು ಪಡೆಯಿತು. ಮಹಿಳೆಯರು ಭಜನಾ ಕುಣಿತ, ಕೋಲಾಟ ಹಾಗೂ ಕೀರ್ತನೆಗಳ ಮೂಲಕ ಭಕ್ತಿ ಭಾವವನ್ನೇ ಹರಿಸಿದರು. ಶೃಂಗೇರಿ ಶ್ರೀ ಶಂಕರ ಮಠದ ಶ್ರೀಕಂಠಯ್ಯ, ಬ್ರಾಹ್ಮಣ ಸಭೆಯ ಅಧ್ಯಕ್ಷ ಮಂಜುನಾಥಮೂರ್ತಿ, ರಾಜ್ಯ ಉಪಾಧ್ಯಕ್ಷ ಕೆ.ಪಿ.ಎಸ್. ಪ್ರಮೋದ್, ಮತ್ತಿತರರು ಪಾಲ್ಗೊಂಡಿದ್ದರು.

